# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924ರಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಅಂಗವಾಗಿ 'ಗಾಂಧಿ ಭಾರತ' ಕಾರ್ಯಕ್ರಮ ಆಯೋಜನೆ ಬಗ್ಗೆ.

ಓದಲಾಗಿದೆ:-1. ಸರ್ಕಾರದ ಆದೇಶ ಸಂಖ್ಯೆ:ಕಸಿಐ-ಪಿಐಪಿ/106/2024, ದಿ:15/07/2024.

2. ಸರ್ಕಾರದ ಆದೇಶ ಸಂಖ್ಯೆ:ಕಸಿಐ-ಪಿಐಪಿ/106/2024, ದಿ:26/09/2024.

3. ಸರ್ಕಾರದ ಆದೇಶ ಸಂಖ್ಯೆ:ಕಸಿಐ-ಪಿಐಪಿ/264/2024, ದಿ:01/10/2024 ಮತ್ತು ತಿದ್ದುಪಡಿ ಆದೇಶ ದಿ:16/10/2024.

4. ಆಯುಕ್ತರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಪತ್ರ ಸಂಖ್ಯೆ: ವಾಸಾಸಂಇ/ಕ್ಷೇ.ಪ್ರ./ಬೆ.ವಿ.ಮ.ಅ./2024-25/8314, ದಿನಾಂಕ:27/11/2024

5. ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಪತ್ರ ಸಂ:ವಾಸಾಸಂಇ/ಕ್ಷೇ.ಪ್ರ/ಗಾಂಧಿಭಾರತ/2023-24/8560, ದಿ:04/12/2024

-*****-

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಆದೇಶದಲ್ಲಿ 2024-25ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ 429ರನ್ವಯ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924ರಲ್ಲಿ ನಡೆದ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಕೊಡುಗೆಯನ್ನು ಸ್ಮರಿಸಲು ರೂ.2.00 ಕೋಟಿ ವೆಚ್ಚದಲ್ಲಿ ಕಾರ್ಯಕ್ರಮವನ್ನು ಆಯೋಜಿಸಿ ಆಯವ್ಯಯ ಘೋಷಣೆಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (2)ರ ಆದೇಶದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924ರಲ್ಲಿ ನಡೆದ ಬೆಳಗಾವಿ ಕಾಂಗ್ರೆಸ್ ಅಧಿವೇಶನವು ಈ ವರ್ಷ ಶತಮಾನದ ಮೈಲಿಗಲ್ಲನ್ನು ಪೂರ್ಣಗೊಳಿಸುತ್ತಿರುವ ಸಂದರ್ಭದಲ್ಲಿ, ಆಯವ್ಯಯ ಘೋಷಣೆಯಂತೆ ವಿಶೇಷ ಕಾರ್ಯಕ್ರಮಗಳ ಆಯೋಜನೆಗೆ ಸರ್ಕಾರದ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಗಾಂಧೀಜಿಯವರ ಜೀವನ ಹಾಗೂ ಸ್ವಾತಂತ್ರ್ಯ ಹೋರಾಟದ ಬಗ್ಗೆ ಮಾಹಿತಿಯಿರುವ ಪರಿಣಿತರು ಹಾಗೂ ಜಿಲ್ಲಾಡಳಿತದ ಅಧಿಕಾರಿಗಳನ್ನೊಳಗೊಂಡ ಸಲಹಾ ಸಮಿತಿಯನ್ನು ರಚಿಸಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (3)ರ ಆದೇಶ ಹಾಗೂ ತಿದ್ದುಪಡಿ ಆದೇಶದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಆದರ್ಶ, ಸ್ವಾತಂತ್ರ್ಯ ಸಂಗ್ರಾಮದಲ್ಲಿ ಭಾಗಿಯಾಗಿ ತ್ಯಾಗ-ಬಲಿದಾನಗಳನ್ನು ನೀಡಿದ ನಾಯಕರ ಬಗ್ಗೆ ಇಂದಿನ ಯುವ ಪೀಳಿಗೆಗೆ ಪರಿಚಯಿಸುವ ಮತ್ತು ಗಾಂಧೀಜಿಯವರ ಮೌಲ್ಯಗಳು, ಆದರ್ಶಗಳ ಸರ್ವಕಾಲಿಕ ಪ್ರಸ್ತುತತೆಯನ್ನು ಇಂದಿನ ಪೀಳಿಗೆಗೆ ಹಾಸುಹೊಕ್ಕಾಗಿಸುವ ದೃಷ್ಟಿಯಿಂದ ಮಹಾತ್ಮ ಗಾಂಧಿಯವರ ಅಧ್ಯಕ್ಷತೆಯಲ್ಲಿ 1924, ಡಿಸೆಂಬರ್ 26-27ರಂದು ನಡೆದ ಏಕೈಕ ಬೆಳಗಾವಿ ಕಾಂಗ್ರೆಸ್ ಅಧಿವೇಶನಕ್ಕೆ ಸಂಬಂಧಪಟ್ಟಂತೆ "ಗಾಂಧಿ ಭಾರತ" ಹೆಸರಿನ ಗಾಂಧಿ ವಿಚಾರ ಧಾರೆಯನ್ನು ಮತ್ತು ಬೆಳಗಾವಿ ಅಧಿವೇಶನದಲ್ಲಿ ಪ್ರಸ್ತಾಪವಾದ ಸಂದೇಶಗಳನ್ನು ನಾಡಿಗೆ ಪರಿಚಯಿಸುವ ಕುರಿತು ವಿವಿಧ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಸರ್ಕಾರವು ರಚಿಸಿರುವ ಸಮಿತಿಯ ಮಾರ್ಗದರ್ಶನದಲ್ಲಿ ಸಂಬಂಧಪಟ್ಟ ಇಲಾಖೆಗಳು ಅನುಷ್ಠಾನಗೊಳಿಸತಕ್ಕದ್ದು ಹಾಗೂ ಸದರಿ ಕಾರ್ಯಕ್ರಮಗಳ ಅನುಷ್ಠಾನವನ್ನು ರೂ.25.00ಕೋಟಿಗಳ indicative allocation ವೆಚ್ಚದಲ್ಲಿ, ಕಾರ್ಯಕ್ರಮಗಳ ಕ್ರಿಯಾಯೋಜನೆಗೆ ಸರ್ಕಾರದ ಅನುಮೋದನೆ ಪಡೆಯುವ ಷರತ್ತಿಗೊಳಪಟ್ಟು ಅನುಷ್ಠಾನಗೊಳಿಸತಕ್ಕದ್ದು ಎಂಬ ನಿರ್ದೇಶನದೊಂದಿಗೆ ಮಾನ್ಯ ಪ್ರವಾಸೋದ್ಯಮ, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವರ ಅಧ್ಯಕ್ಷತೆಯಲ್ಲಿ ಶತಮಾನೋತ್ಸವ ಸಮಿತಿಯನ್ನು ರಚಿಸಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರು ನೋಡಲ್ ಅಧಿಕಾರಿ/ಸಂಚಾಲಕರನ್ನಾಗಿ ನೇಮಿಸಲಾಗಿದೆ ಹಾಗೂ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ ಮತ್ತು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳನ್ನು ಸಹ ಸಂಚಾಲಕರನ್ನಾಗಿ ನೇಮಿಸಲಾಗಿದೆ.

ಮೇಲೆ ಓದಲಾದ (4) ರ ಪತ್ರದಲ್ಲಿ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರು, ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಅನುಷ್ಠಾನ ಸಮಿತಿ ಸಭೆಯ ತೀರ್ಮಾನಗಳಂತೆ 'ಗಾಂಧಿ ಭಾರತ' ಕಾರ್ಯಕ್ರಮಗಳನ್ನು ರೂ.25.00ಕೋಟಿಗಳ ವೆಚ್ಚದಲ್ಲಿ ಆಯೋಜಿಸಲು ಕ್ರಿಯಾ ಯೋಜನೆಯನ್ನು ತಯಾರಿಸಿ ಕಳುಹಿಸುತ್ತಾ, ಆಡಳಿತಾತ್ಮಕ ಅನುಮೋದನೆ ಕೋರಿರುತ್ತಾರೆ.

ಮೇಲೆ ಓದಲಾದ (5)ರ ಪತ್ರದಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924ರಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಅನುಷ್ಠಾನ ಸಮಿತಿ ಸಭೆಯು ದಿನಾಂಕ 02-12-2024ರಂದು ಜರುಗಿದ್ದು, ಸಭೆಯ ನಡವಳಿಯನ್ವಯ, ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924ರ ಡಿಸೆಂಬರ್ 26 ಹಾಗೂ 27 ರಂದು ಬೆಳಗಾವಿಯಲ್ಲಿ 39ನೇ ಕಾಂಗ್ರೆಸ್ ಅಧಿವೇಶನ ಜರುಗಿತ್ತು. ಈ ಐತಿಹಾಸಿಕ ಅಧಿವೇಶನದಲ್ಲಿ ಕರ್ನಾಟಕ ಸೇರಿದಂತೆ ಭಾಷಾವಾರು ಪ್ರಾಂತ್ಯಗಳ ರಚನೆಯ ಕುರಿತು ಚರ್ಚೆಗಳು ನಡೆದಿದ್ದವು. ಮಹಾತ್ಮ ಗಾಂಧೀಜಿಯವರು ಅಧ್ಯಕ್ಷತೆ ವಹಿಸಿದ್ದ ಏಕೈಕ ಕಾಂಗ್ರೆಸ್ ಅಧಿವೇಶನ ಕರ್ನಾಟಕದ ಬೆಳಗಾವಿಯಲ್ಲಿ ನಡೆದಿರುವುದು ಸಮಸ್ತ ಕನ್ನಡಿಗರಿಗೆ ಹೆಮ್ಮೆಯ ವಿಷಯವಾಗಿದೆ. ಈ ಚಾರಿತ್ರಿಕ ಅಧಿವೇಶನಕ್ಕೆ ನೂರು ವರ್ಷಗಳು ಪೂರ್ಣಗೊಂಡಿರುವ ಈ ಸಂದರ್ಭದಲ್ಲಿ ಶತಮಾನೋತ್ಸವ ಅಂಗವಾಗಿ 2024ರ ಡಿಸೆಂಬರ್ 26 ಮತ್ತು 27 ರಂದು ಬೆಳಗಾವಿಯಲ್ಲಿ 'ಗಾಂಧಿ ಭಾರತ' ಕಾರ್ಯಕ್ರಮ ಆಯೋಜಿಸಲಾಗಿದೆ. 2025ರ ಅಕ್ಟೋಬರ್ 2 ರವರೆಗೆ ನಿರಂತರವಾಗಿ ಮಹಾತ್ಮ ಗಾಂಧೀಜಿಯವರ ಸತ್ಯ, ಅಹಿಂಸೆ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆ, ಆರ್ಥಿಕ ಚಿಂತನೆಗಳು, ಗ್ರಾಮ ಸ್ವರಾಜ್, ಖಾದಿ ಚಟುವಟಿಕೆಗಳು ಮತ್ತಿತರ ದೇಶಭಕ್ತಿ ಬಿಂಬಿಸುವ ವೈವಿಧ್ಯಮಯ ಚಟುವಟಿಕೆಗಳನ್ನು, ಶಾಲೆ-ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರಬಂಧ, ಭಾಷಣ, ರಸಪ್ರಶ್ನೆ ಮತ್ತಿತರ ಸ್ಪರ್ಧೆಗಳನ್ನು ವರ್ಷದುದ್ದಕ್ಕೂ ಆಯೋಜಿಸುವ ಮೂಲಕ ಕಾರ್ಯಕ್ರಮವನ್ನು ಜನಮಾನಸಕ್ಕೆ, ಯುವಕರಿಗೆ, ಮಕ್ಕಳಿಗೆ ತಲುಪಿಸಬೇಕು ಹಾಗೂ 'ಗಾಂಧಿ ಭಾರತ' ಕಾರ್ಯಕ್ರಮದ ಲಾಂಛನವನ್ನು ರಾಜ್ಯದ ಎಲ್ಲಾ ಸರ್ಕಾರಿ ಪತ್ರ ವ್ಯವಹಾರಗಳಲ್ಲಿ, ಲೆಟರ್ ಹೆಡ್, ಆಮಂತ್ರಣ ಪತ್ರಿಕೆ, ಸಭೆ-ಸಮಾರಂಭಗಳ ಬ್ಯಾನರ್, ಬ್ಯಾಕ್ ಡ್ರಾಪ್, ಜಾಹೀರಾತು, ಹೆದ್ದಾರಿ ಫಲಕ, ಬಸ್ ಬ್ರ್ಯಾಂಡಿಂಗ್, ಆಟೋ ಬ್ರ್ಯಾಂಡಿಂಗ್, ರೈಲ್ವೆ ಬ್ರ್ಯಾಂಡಿಂಗ್, ಬಸ್ ನಿಲ್ದಾಣ ಮತ್ತು ಶೆಲ್ಟರ್ ಗಳಲ್ಲಿ ಸರ್ಕಾರದ ವಿವಿಧ ಇಲಾಖೆಗಳಿಂದ ಅಳವಡಿಸಲಾಗುವ ಜಾಹೀರಾತು ಮತ್ತು ಪ್ರಚಾರ ಸಾಮಗ್ರಿಗಳಲ್ಲಿ ಕಡ್ಡಾಯವಾಗಿ ಮುದ್ರಿಸಬೇಕು. ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಶಾಲೆ-ಕಾಲೇಜು, ವಿಶ್ವವಿದ್ಯಾಲಯ ಸೇರಿದಂತೆ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಧ್ಯಾನಸ್ಥ ಗಾಂಧೀಜಿಯವರ ಭಾವಚಿತ್ರವನ್ನು ಮತ್ತು ಅವರು ಬೋಧಿಸಿದ ಸಪ್ತ ಸಾಮಾಜಿಕ ಪಾತಕಗಳ ಫಲಕವನ್ನು ಕಡ್ಡಾಯವಾಗಿ ಪ್ರಮುಖ ಸ್ಥಳಗಳಲ್ಲಿ ಪ್ರದರ್ಶಿಸಬೇಕು ಎಂದು ಮಾನ್ಯ ಮುಖ್ಯಮಂತ್ರಿಯವರು ಸೂಚಿಸಿರುತ್ತಾರೆ ಹಾಗೂ ಶತಮಾನೋತ್ಸವ ಸಮಿತಿಯ ಸಭೆಯಲ್ಲಿ ತೀರ್ಮಾನಿಸಿರುವಂತೆ ಇತರೆ ಪ್ರಮುಖ ವಿಷಯಗಳ ಬಗ್ಗೆ ಸಚಿವ ಸಂಪುಟದ ಅನುಮೋದನೆ ಪಡೆದುಕೊಡುವಂತೆ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಸಚಿವ ಸಂಪುಟದ ಅನುಮೋದನೆ ಪಡೆಯಲಾಗಿದ್ದು, ಅದರನ್ವಯ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೆಸಿಐ-ಪಿಐಪಿ/264/2024(ಭಾ-2) ಬೆಂಗಳೂರು, ದಿನಾಂಕ:16/12/2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924ರಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಅಂಗವಾಗಿ 'ಗಾಂಧಿ ಭಾರತ' ಕಾರ್ಯಕ್ರಮ ಆಯೋಜನೆಗೆ ಸಂಬಂಧಪಟ್ಟಂತೆ ಕರ್ನಾಟಕ ಸರ್ಕಾರ (ವ್ಯವಹಾರ ನಿರ್ವಹಣೆ) ನಿಯಮಗಳು 1977ರ Schedule-Iರ ಕ್ರಮ ಸಂಖ್ಯೆ 15ರ ಪ್ರಕಾರ ಈ ಕೆಳಕಂಡ ಅಂಶಗಳಿಗೆ ಸಚಿವ ಸಂಪುಟವು ಅನುಮೋದನೆ ನೀಡಿರುತ್ತದೆ:

1. ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ, 1924ರಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಅಂಗವಾಗಿ 2024ರ ಡಿಸೆಂಬರ್ 26 ಹಾಗೂ 27ರಂದು 'ಗಾಂಧಿ ಭಾರತ' ಕಾರ್ಯಕ್ರಮಗಳನ್ನು ಆರ್ಥಿಕ ಇಲಾಖೆಯು ಸಹಮತಿ ನೀಡಿರುವಂತೆ



Generated from eOffice by PRABHAKARA K, KCI-SO-INFO(KP), SECTION OFFICER, KCI on 17/12/2024 05:20 PM

File No. ED/104/VVD/2025-ED_SO_GEN2-EDUCATION HIGHER SEC (Computer No. 1761753)

ರೂ. 25.00 ಕೋಟಿ indicative allocation ವೆಚ್ಚದ ಮಿತಿಯಲ್ಲಿ ಅನುಬಂಧದಲ್ಲಿರುವ ಕ್ರಿಯಾ ಯೋಜನೆಯಂತೆ ಆಯೋಜಿಸಲು.

2. **ಗಾಂಧಿ ಭಾರತ ಕಾರ್ಯಕ್ರಮದ ಲಾಂಛನ:** ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ 1924ರಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಚರಣೆ ಸಲುವಾಗಿ ಆಯೋಜಿಸಿರುವ "ಗಾಂಧಿ ಭಾರತ" ಕಾರ್ಯಕ್ರಮದ ಲಾಂಛನವನ್ನು ಎಲ್ಲಾ ಇಲಾಖೆಗಳು ಸರ್ಕಾರಿ ಪತ್ರ ವ್ಯವಹಾರ ಹಾಗೂ ಪ್ರಚಾರ ಸಾಮಗ್ರಿಗಳಲ್ಲಿ ಕಡ್ಡಾಯವಾಗಿ ಅಳವಡಿಸುವುದು. ಲೆಟರ್ ಹೆಡ್, ಆಮಂತ್ರಣ ಪತ್ರಿಕೆ, ಸರ್ಕಾರಿ ಸಭೆ-ಸಮಾರಂಭಗಳ ಬ್ಯಾನರ್, ಬ್ಯಾಕ್ ಡ್ರಾಪ್, ಜಾಹೀರಾತು, ಹೆದ್ದಾರಿ ಫಲಕ, ಬಸ್ ಬ್ರ್ಯಾಂಡಿಂಗ್, ಆಟೋ ಬ್ರ್ಯಾಂಡಿಂಗ್, ರೈಲ್ವೆ ಬ್ರ್ಯಾಂಡಿಂಗ್, ಬಸ್ ನಿಲ್ದಾಣ ಮತ್ತು ಶೆಲ್ಟರ್ ಗಳಲ್ಲಿ ಸರ್ಕಾರದ ವಿವಿಧ ಇಲಾಖೆಗಳಿಂದ ಅಳವಡಿಸಲಾಗುವ ಜಾಹೀರಾತು ಮತ್ತು ಪ್ರಚಾರ ಸಾಮಾಗ್ರಿಗಳಲ್ಲಿ 'ಗಾಂಧಿ ಭಾರತ' ಕಾರ್ಯಕ್ರಮದ ಲಾಂಛನವನ್ನು ಕಡ್ಡಾಯವಾಗಿ ಮುದ್ರಿಸಬೇಕು. ಇದರ ವೆಚ್ಚವನ್ನು ಆಯಾ ಇಲಾಖೆಗಳು ತಮ್ಮ ಅನುದಾನದಲ್ಲಿ ಭರಿಸಿಕೊಳ್ಳುವುದು.

3. **ಮಹಾತ್ಮ ಗಾಂಧೀಜಿಯವರ ಧ್ಯಾನಸ್ಥ ಸ್ಥಿತಿಯ ಭಾವಚಿತ್ರ:** ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಶಾಲಾ-ಕಾಲೇಜು, ವಿಶ್ವವಿದ್ಯಾಲಯ ಸೇರಿದಂತೆ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಕಚೇರಿಗಳಲ್ಲಿ ಹಾಗೂ ಸಭಾಂಗಣಗಳಲ್ಲಿ, ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು, ಸಹಕಾರಿ ಸಂಸ್ಥೆಗಳು ಮತ್ತು ನಿಗಮ/ಮಂಡಳಿಗಳಲ್ಲಿ, ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಮಹಾತ್ಮ ಗಾಂಧೀಜಿಯವರ ಧ್ಯಾನಸ್ಥ ಸ್ಥಿತಿಯ ಭಾವಚಿತ್ರವನ್ನು ಅಳವಡಿಸುವುದು ಮತ್ತು ಸದರಿ ವೆಚ್ಚವನ್ನು ತಮ್ಮ ಅನುದಾನದಲ್ಲಿಯೇ ಭರಿಸಿಕೊಳ್ಳುವುದು.

4. **ಮಹಾತ್ಮ ಗಾಂಧೀಜಿಯವರು ಬೋಧಿಸಿದ ಸಪ್ತಸಾಮಾಜಿಕ ಪಾತಕಗಳ ಫಲಕ:** ಮಹಾತ್ಮ ಗಾಂಧೀಜಿಯವರು ಬೋಧಿಸಿದ ಸಪ್ತ ಸಾಮಾಜಿಕ ಪಾತಕಗಳ ಫಲಕಗಳನ್ನು ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಶಾಲಾ-ಕಾಲೇಜು, ವಿಶ್ವವಿದ್ಯಾಲಯ ಸೇರಿದಂತೆ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಕಚೇರಿಗಳಲ್ಲಿ ಹಾಗೂ ಸಭಾಂಗಣಗಳಲ್ಲಿ, ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು, ಸಹಕಾರಿ ಸಂಸ್ಥೆಗಳು ಮತ್ತು ನಿಗಮ/ಮಂಡಳಿಗಳಲ್ಲಿ, ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಅಳವಡಿಸುವುದು ಹಾಗೂ ಸದರಿ ವೆಚ್ಚವನ್ನು ತಮ್ಮ ಅನುದಾನದಲ್ಲಿಯೇ ಭರಿಸಿಕೊಳ್ಳುವುದು

5. **ಶಿಕ್ಷಣ ಇಲಾಖೆ:** ವರ್ಷವಿಡೀ ಎಲ್ಲಾ ಶಾಲೆಗಳಲ್ಲಿ 'ಗಾಂಧಿ ಭಾರತ' ಅಂಗವಾಗಿ ನೈತಿಕ ಶಿಕ್ಷಣ ಬೋಧಿಸುವ 'ನಾವು ಮನುಜರು' ಕಾರ್ಯಕ್ರಮಗಳ ಆಯೋಜನೆ, ಮಕ್ಕಳಲ್ಲಿ ಗಾಂಧೀಜಿ ವಿಚಾರಧಾರೆ ಬಗ್ಗೆ ಅರಿವು ಮೂಡಿಸಲು ವಿವಿಧ ಸ್ಪರ್ಧಾ ಕಾರ್ಯಕ್ರಮಗಳ ಆಯೋಜನೆ. ಗಾಂಧೀಜಿ ಅವರು ಬೋಧಿಸಿದ ಸಪ್ತ ಸಾಮಾಜಿಕ ಪಾತಕಗಳು ಹಾಗೂ ಸಂವಿಧಾನದ ಪೀಠಿಕೆಗಳನ್ನು ಪಠ್ಯಪುಸ್ತಕಗಳಲ್ಲಿ ಮುದ್ರಿಸಿ ಎಲ್ಲಾ ಶಾಲೆಗಳಲ್ಲಿ ವಿತರಣೆ ಮಾಡುವುದು 2025ರ ಅಕ್ಟೋಬರ್-02 ರವರೆಗೆ ನಿರಂತರವಾಗಿ ಮಹಾತ್ಮ ಗಾಂಧೀಜಿಯವರ ಸತ್ಯ, ಅಹಿಂಸೆ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆ, ಆರ್ಥಿಕ ಚಿಂತನೆಗಳು, ಗ್ರಾಮ ಸ್ವರಾಜ್, ಖಾದಿ ಚಟುವಟಿಕೆಗಳು ಮತ್ತಿತರ ದೇಶಭಕ್ತಿ ಬಿಂಬಿಸುವ ವೈವಿಧ್ಯಮಯ ಚಟುವಟಿಕೆಗಳನ್ನು, ಶಾಲೆ-ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರಬಂಧ, ಭಾಷಣ, ರಸಪ್ರಶ್ನೆ ಮತ್ತಿತರ ಸ್ಪರ್ಧೆಗಳನ್ನು ವರ್ಷದುದ್ದಕ್ಕೂ ಆಯೋಜಿಸುವ ಮೂಲಕ ಕಾರ್ಯಕ್ರಮವನ್ನು ಜನಮಾನಸಕ್ಕೆ, ಯುವಕರಿಗೆ, ಮಕ್ಕಳಿಗೆ ತಲುಪಿಸುವುದು. ಮಹಾತ್ಮ ಗಾಂಧೀಜಿಯವರು ಬೋಧಿಸಿದ ಸಪ್ತ ಸಾಮಾಜಿಕ ಪಾತಕಗಳನ್ನು ಪ್ರತಿದಿನ ಎಲ್ಲಾ ಶಾಲಾ-ಕಾಲೇಜುಗಳ ಪ್ರಾರ್ಥನೆ ಸಮಯದಲ್ಲಿ ಸಾಮೂಹಿಕವಾಗಿ ವಾಚನ ಮಾಡುವುದು. ಸದರಿ ವೆಚ್ಚವನ್ನು ತಮ್ಮ ಅನುದಾನದಲ್ಲಿಯೇ ಭರಿಸಿಕೊಳ್ಳುವುದು.

ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವವನ್ನು ರೂ.25.00ಕೋಟಿಗಳ indicative allocation ವೆಚ್ಚದಲ್ಲಿ ಆಯೋಜಿಸುವ ಬಗ್ಗೆ, ಶತಮಾನೋತ್ಸವ ಅನುಷ್ಠಾನ ಸಮಿತಿಯ ನೋಡೆಲ್ ಅಧಿಕಾರಿಯವರಾದ ವಾರ್ತಾ ಆಯುಕ್ತರು ಸರ್ಕಾರಕ್ಕೆ ಸಲ್ಲಿಸಿದ್ದ ಕ್ರಿಯಾ ಯೋಜನೆಯ ಬಗ್ಗೆ ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯಂತೆ, ಬೆಳಗಾವಿ ಜಿಲ್ಲೆಗೆ ಸಂಬಂಧಿಸಿದ ಅಲ್ಪಾವಧಿ ಕಾರ್ಯಕ್ರಮ/ಕಾಮಗಾರಿಗಳನ್ನು ರೂ.648.50 ಲಕ್ಷಗಳ ವೆಚ್ಚದಲ್ಲಿ ಹಾಗೂ ರಾಜ್ಯ ಮಟ್ಟದಲ್ಲಿ ಅನುಷ್ಠಾನಗೊಳಿಸಬಹುದಾದ ಕಾರ್ಯಕ್ರಮ/ಕಾಮಗಾರಿಗಳನ್ನು ರೂ.760.00 ಲಕ್ಷಗಳ ವೆಚ್ಚದಲ್ಲಿ ಒಟ್ಟು ಎರಡೂ

ಸೇರಿ ರೂ.1408.50 ಲಕ್ಷಗಳ ವೆಚ್ಚದಲ್ಲಿ ಅನುಷ್ಠಾನಗೊಳಿಸುವ ಕ್ರಿಯಾ ಯೋಜನೆಗೆ ಹಾಗೂ ಬಾಕಿ ಉಳಿದ ರೂ.1091.50 ಲಕ್ಷಗಳ ಅನುದಾನದಿಂದ ವರ್ಷಪೂರ್ತಿ ವಿಶೇಷ ಕಾರ್ಯಕ್ರಮ ಹಾಗೂ ವಿಶೇಷ ಅಭಿಯಾನಗಳನ್ನು ಹಮ್ಮಿಕೊಳ್ಳಲು ಕ್ರಿಯಾಯೋಜನೆಯನ್ನು ತಯಾರಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸತಕ್ಕದ್ದು ಎಂಬ ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಸಚಿವ ಸಂಪುಟದ ಅನುಮೋದನೆಯಂತೆ, ಕ್ರಮ ಸಂಖ್ಯೆ 2, 3 ಮತ್ತು 4ರ ಮಾದರಿಯನ್ನು ಅನುಬಂಧ-1, 2 ಮತ್ತು 3ರಲ್ಲಿ ಅಳವಡಿಸಲಾಗಿದ್ದು, ಸಂಬಂಧಪಟ್ಟ ಎಲ್ಲಾ ಇಲಾಖಾ ಮುಖ್ಯಸ್ಥರು ತಮ್ಮ ಆಡಳಿತ ವ್ಯಾಪ್ತಿಯಲ್ಲಿ ಕಡ್ಡಾಯವಾಗಿ ಜಾರಿಗೆ ತರತಕ್ಕದ್ದು. ಕ್ರಮಸಂಖ್ಯೆ 5ರ ಕುರಿತು ಶಿಕ್ಷಣ ಇಲಾಖೆಯು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಈ ಆದೇಶವನ್ನು ಸಚಿವ ಸಂಪುಟ ಸಭೆ ಸಂಖ್ಯೆ: 25/ಪ್ರಕರಣ ಸಂಖ್ಯೆ:ಸಿ.701/2024, ದಿ:06/12/2024 ರಲ್ಲಿ ನೀಡಿರುವ ಅನುಮೋದನೆಯ ಮೇರೆಗೆ ಮತ್ತು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 05 ಟಿಎಫ್‌ಪಿ 2024, ದಿನಾಂಕ:07/10/2024ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

M. Jacintha
(ಎಂ.ಜೆಸಿಂತ) 16/12/2024
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ
(ವಾರ್ತಾ ಶಾಖೆ)

ಗೆ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ)/(ಎ&ಇ), ಬೆಂಗಳೂರು.
2. ಶತಮಾನೋತ್ಸವ ಸಮಿತಿಯ ಮಾನ್ಯ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ(ವಾರ್ತಾ ಆಯುಕ್ತರ ಮುಖಾಂತರ)
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ.
4. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
5. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ.
6. ಸರ್ಕಾರದ ಅಪರ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನಸೌಧ.
7. ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು.
8. ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಳಗಾವಿ
9. ಆಯುಕ್ತರು, ಖಜಾನೆ ನಿರ್ದೇಶನಾಲಯ, 6ನೇ ಮಹಡಿ, ಕೆಪಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
10. ನಿರ್ದೇಶಕರು(ಪಿಎಂಐ ವಿಭಾಗ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
11. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
12. ಆಂತರಿಕ ಆರ್ಥಿಕ ಸಲಹೆಗಾರರು ಮತ್ತು ಪದನಿಮಿತ್ತ ಉಪಕಾರ್ಯದರ್ಶಿ, ಕನ್ನಡ ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಸರ್ಕಾರದ ಕಾರ್ಯದರ್ಶಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
14. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ ವೆಚ್ಚ (5&7), ವಿಧಾನಸೌಧ, ಬೆಂಗಳೂರು.
15. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.



ಮಹಾತ್ಮ ಗಾಂಧೀಜಿಯವರು ಬೋಧಿಸಿದ

**ಸಪ್ತ ಸಾಮಾಜಿಕ ಪಾತಕಗಳು**

# SEVEN SOCIAL SINS

PREACHED BY MAHATMA GANDHI

**ತತ್ವರಹಿತ ರಾಜಕಾರಣ**

**POLITICS WITHOUT PRINCIPLES**

**ದುಡಿಮೆಯಿಲ್ಲದ ಸಂಪತ್ತು**

**WEALTH WITHOUT WORK**

**ಆತ್ಮಸಾಕ್ಷಿಯಿಲ್ಲದ ಸಂತೋಷ**

**PLEASURE WITHOUT CONSCIENCE**

**ಚಾರಿತ್ರ್ಯವಿಲ್ಲದ ಶಿಕ್ಷಣ**

**EDUCATION WITHOUT CHARACTER**

**ನೀತಿಯಿಲ್ಲದ ವ್ಯಾಪಾರ**

**COMMERCE WITHOUT MORALITY**

**ಮಾನವೀಯತೆಯಿಲ್ಲದ ವಿಜ್ಞಾನ**

**SCIENCE WITHOUT HUMANITY**

**ತ್ಯಾಗವಿಲ್ಲದ ಪೂಜೆ**

**WORSHIP WITHOUT SACRIFICE**



ಆಯುಕ್ತರು
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ile No. ED/104/VVD/2025-ED_SO_GEN2-EDUCATION HIGHER SEC (Computer No. 1761753)
ienerated from eOffice by MUMTAZ R, ED-GEN2-ASST(MR) I/C, ASSISTANT, EDUCATION HIGHER DEPARTMENT on 29/05/2025 02:56 PM




ಆಯುಕ್ತರು
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ



File No. ED/104/VVD/2025-ED_SO_GEN2-EDUCATION HIGHER SEC (Computer No. 1761753)
Generated from eOffice by MUMTAZ R, ED-GEN2-ASST(MR) I/C, ASSISTANT, EDUCATION HIGHER DEPARTMENT on 29/05/2025 03:5_ PM